# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 103 |
| ಸದಸ್ಯರ ಹೆಸರು | : | ಶ್ರೀ ಮುನಿರಾಜು ಗೌಡ ಪಿ.ಎಂ<br>(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 12.09.2022 |
| ಉತ್ತರಿಸುವ ಸಚಿವರು | : | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು |

| ಕ್ರಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಸಿಗರೇಟ್ ಮತ್ತು ಇತರ ತಂಬಾಕು ಉತ್ಪನ್ನಗಳ ಸೇವನ ಮಾಡುವವರ ಸಂಖ್ಯೆ ಎಷ್ಟು; | ವಿಶ್ವ ಆರೋಗ್ಯ ಸಂಸ್ಥೆ 2016-17ರಲ್ಲಿ ನಡೆಸಿರುವ ಗ್ಲೋಬಲ್ ಅಡಲ್ಟ್ ಟೊಬ್ಯಾಕೋ ಸರ್ವೆ ಪ್ರಕಾರ, ಕರ್ನಾಟಕ ಸುಮಾರು 22..8% ವಯಸ್ಕರು (ಸುಮಾರು 1.36 ಕೋಟಿ) ತಂಬಾಕು ಉತ್ಪನ್ನಗಳನ್ನು ಸೇವನೆ ಮಾಡುತ್ತಿದ್ದಾರೆ. |
| ಆ) | ರಾಜ್ಯದಲ್ಲಿ ಸಿಗರೇಟ್ ಮತ್ತು ಇತರ ತಂಬಾಕು ಉತ್ಪನ್ನಗಳ ಸೇವನೆಯಿಂದ ಮಾರಣಾಂತಿಕ ರೋಗಕ್ಕೆ ತುತ್ತಾಗಿ ಮೃತರಾಗುತ್ತಿರುವವರ ಸಂಖ್ಯೆ ಎಷ್ಟು; (ಕಳೆದ 5 ವರ್ಷದ ಜಿಲ್ಲಾವಾರು ಮಾಹಿತಿ ನೀಡುವುದು) | ದೇಶದಲ್ಲಿ ಪ್ರತಿ ವರ್ಷ ಸುಮಾರು 10 ಲಕ್ಷ ಜನರು ಸಿಗರೇಟ್ ಮತ್ತು ಇತರ ತಂಬಾಕು ಉತ್ಪನ್ನಗಳ ಸೇವನೆಯಿಂದ ಮಾರಣಾಂತಿಕ ರೋಗಕ್ಕೆ ತುತ್ತಾಗಿ ಮೃತರಾಗುತ್ತಿದ್ದಾರೆ. |
| ಇ) | ನಮ್ಮ ರಾಜ್ಯದಲ್ಲಿ ಕಳೆದ 5 ವರ್ಷದಲ್ಲಿ ಪರೋಕ್ಷ ಧೂಮಪಾನಕ್ಕೆ ಬಲಿಯಾದವರ ಸಂಖ್ಯೆ ಎಷ್ಟು ಪರೋಕ್ಷ ಧೂಮಪಾನದಿಂದ ಬಲಿಯಾಗುವವರ ಸಂಖ್ಯೆ ತಪ್ಪಿಸಲು ಸರ್ಕಾರ ಕೈಗೊಂಡ ಕ್ರಮಗಳೇನು; | ವಿಶ್ವ ಆರೋಗ್ಯ ಸಂಸ್ಥೆ 2016-17ರಲ್ಲಿ ನಡೆಸಿರುವ ಗ್ಲೋಬಲ್ ಅಡಲ್ಟ್ ಟೊಬ್ಯಾಕೋ ಸರ್ವೆ ಪ್ರಕಾರ, ಕರ್ನಾಟಕ ಸುಮಾರು 23.9% ವಯಸ್ಕರು (ಸುಮಾರು 1.43 ಕೋಟಿ) ಜನರು ಪರೋಕ್ಷ ಧೂಮಪಾನಕ್ಕೆ ಒಳಗಾಗುತ್ತಿದ್ದಾರೆ ಎಂದು ವರದಿ ನೀಡಿದೆ.<br>• ರಾಷ್ಟ್ರೀಯ ತಂಬಾಕು ನಿಯಂತ್ರಣ ಕಾರ್ಯಕ್ರಮದಡಿ ಕೋಟ್ಪಾ 2003 ಕಾಯ್ದೆಯನ್ನು ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆ.<br>• ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನ ಮಾಡಿದವರಿಗೆ ಸ್ಥಳದಲ್ಲಿಯೇ ದಂಡ ವಿಧಿಸಲು 176 ಕೋಟ್ಪಾ ತನಿಖಾ ತಂಡವನ್ನು ರಚಿಸಲಾಗಿದ್ದು, ಪ್ರತಿವರ್ಷ 14 ಲಕ್ಷಕಿಂತ ಹೆಚ್ಚು ಜನರಿಗೆ ಕೋಟ್ಪಾ-2003 ಸೆಕ್ಷನ್ 4ರ ಉಲ್ಲಂಘನೆಗೆ ದಂಡದವನ್ನು ವಿಧಿಸಿ, ಪರೋಕ್ಷ ಧೂಮಪಾನವನ್ನು ತಡೆಗಟ್ಟಲು ಕ್ರಮವಹಿಸಲಾಗಿದೆ. |
| ಈ) | ತಂಬಾಕು ಸೇವನೆಯ ನಿಯಂತ್ರಣಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು; | • ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನ ಮಾಡಿದವರಿಗೆ ಸ್ಥಳದಲ್ಲಿಯೇ ದಂಡ ವಿಧಿಸುವುದು.<br>• ಕೋಟ್ಪಾಕಾಯ್ದೆ ಜಾರಿ ಮತ್ತು ಅನುಷ್ಠಾನ.<br>• ರಾಜ್ಯದಲ್ಲಿ ರಾಷ್ಟ್ರೀಯ ತಂಬಾಕು ನಿಯಂತ್ರಣ ಕಾರ್ಯಕ್ರಮವು 2014-15 ಜಾರಿಗೆ ಬಂದಿರುತ್ತದೆ. |

| | | |
|---|---|---|
| | | • ರಾಜ್ಯದ ಎಲ್ಲಾ 30 ಜಿಲ್ಲೆಗಳಲ್ಲಿ ಧೂಮಪಾನ ನಿಯಂತ್ರಿಸಲು ಜಿಲ್ಲಾ ತನಿಖಾ ತಂಡವನ್ನು ರಚಿಸಲಾಗಿದ್ದು, ನಿಯಮಿತವಾಗಿ ಕೋಟ್ಪಾ ದಾಳಿಗಳನ್ನು ಜಿಲ್ಲಾ ಮಟ್ಟದಲ್ಲಿ ನಡಸಲಾಗುತ್ತಿದೆ. 176 ತಾಲ್ಲೂಕುವಾರು ತನಿಖಾ ತಂಡ ರಚಿಸಲಾಗಿದೆ.<br>• ದೇಶದಲ್ಲಿ ಅತಿ ಹೆಚ್ಚು ಕೋಟ್ಪಾ 2003 ಉಲ್ಲಂಘನೆಯ ಪ್ರಕರಣಗಳನ್ನು ದಾಖಲು ಮಾಡಲಾಗಿದೆ.<br>• ರಾಷ್ಟ್ರೀಯ ತಂಬಾಕು ನಿಯಂತ್ರಣ ಕಾರ್ಯಕ್ರಮದ ಅಡಿಯಲ್ಲಿ ಪ್ರತಿ ಜಿಲ್ಲೆಯಲ್ಲಿ 100 ಶಾಲಾ ಕಾರ್ಯಕ್ರಮಗಳನ್ನು ಅಯೋಜಿಸಲಾಗುತ್ತಿದೆ. ಹದಿಹರೆಯದ ಮಕ್ಕಳಿಗೆ ತಂಬಾಕುವಿನಿಂದ ದೂರವಿರುವಂತೆ ಅರಿವು ಮೂಡಿಸಲಾಗುವುದು.<br>• ರಾಷ್ಟ್ರೀಯ ತಂಬಾಕು ನಿಯಂತ್ರಣ ಕಾರ್ಯಕ್ರಮದಡಿಯಲ್ಲಿ ಎಲ್ಲಾ 30 ಜಿಲ್ಲಾ ಆಸ್ಪತ್ರೆಗಳಲ್ಲಿ ತಂಬಾಕು ವ್ಯಸನ ಮುಕ್ತ ಕೇಂದ್ರ ಕಾರ್ಯನಿರ್ವಹಿಸುತ್ತಿದೆ. ಈ ಕೇಂದ್ರಗಳಲ್ಲಿ ಉಚಿತ ಆಪ್ತ ಸಮಾಲೋಚನೆ ಹಾಗೂ ಚಿಕಿತ್ಸೆ ನೀಡಲಾಗುತ್ತಿದೆ. |
| ಉ) | ರಾಜ್ಯದಲ್ಲಿರುವ ವ್ಯಸನ ಮುಕ್ತ ಕೇಂದ್ರಗಳು ಎಷ್ಟು; ಸದರಿ ಕೇಂದ್ರಗಳಲ್ಲಿ ಪ್ರತಿವರ್ಷ ಎಷ್ಟು ಜನರಿಗೆ ಚಿಕಿತ್ಸೆ ನೀಡಲಾಗುತ್ತಿದೆ? (ವ್ಯಸನ ಮುಕ್ತ ಕೇಂದ್ರವಾರು ಕಳೆದ 5 ವರ್ಷದ ಮಾಹಿತಿ ನೀಡುವುದು) | ರಾಷ್ಟ್ರೀಯ ತಂಬಾಕು ನಿಯಂತ್ರಣ ಕಾರ್ಯಕ್ರಮದಲ್ಲಿಎಲ್ಲಾ 30 ಜಿಲ್ಲಾ ಆಸ್ಪತ್ರೆಗಳಲ್ಲಿ ತಂಬಾಕು ವ್ಯಸನ ಮುಕ್ತ ಕೇಂದ್ರ ಕಾರ್ಯನಿರ್ವಹಿಸುತ್ತಿದೆ.<br><br>ಕಳೆದ 5 ವರ್ಷದ ಮಾಹಿತಿ ಈ ಕೆಳಕಂಡಂತಿದೆ.<br><br>ಕ್ರಮ ಸಂಖ್ಯೆ / ವರ್ಷ / ಚಿಕಿತ್ಸೆ ಪಡೆದವರ ಸಂಖ್ಯೆ<br>1 / 2017-18 / 11270<br>2 / 2018-19 / 19560<br>3 / 2019-20 / 22700<br>4 / 2020-21 / 26802<br>5 / 2021-22 / 56611 |

**ಕಡತ ಸಂಖ್ಯೆ: ಆಕುಕ 106 ಎಸ್.ಬಿ.ವಿ. 2022**

(ಡಾ|| ಕೆ. ಸುಧಾಕರ್)
**ಆರೋಗ್ಯ ಮತ್ತು ಕುಟುಂಬ ಕಲ್ಯಾಣ**
**ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು**